# <u>ಕರ್ನಾಟಕ ವಿಧಾನ ಪರಿಷತ್ತು</u>

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1429** |
| ಸದಸ್ಯರ ಹೆಸರು | : | ಶ್ರೀ ಎಸ್. ಕೇಶವಪ್ರಸಾದ್<br>(ವಿಧಾನ ಸಭೆಯಿಂದ ಚುನಾಯಿತರು) |
| ಉತ್ತರಿಸಬೇಕಾದ ದಿನಾಂಕ | : | 22-08-2025. |
| ಉತ್ತರಿಸುವ ಸಚಿವರು | : | ಕೃಷಿ ಸಚಿವರು |

<table>
<tr><th colspan="2">ಪ್ರಶ್ನೆ</th><th>ಉತ್ತರ</th></tr>
<tr><td>ಅ.</td><td>ಮಂಡ್ಯ ಕೃಷಿ ವಿಜ್ಞಾನ ವಿಶ್ವವಿದ್ಯಾಲಯ ಸ್ಥಾಪನೆಗೆ ಕೈಗೊಂಡ ಕ್ರಮಗಳೇನು; ಇದಕ್ಕೆ ನೀಡಿದ ಭೂಮಿಯ ವಿಸ್ತೀರ್ಣ ಮೀಸಲಿಟ್ಟ ಅನುದಾನ ಯಾವುವು; ಕೈಗೊಂಡ ಕಾಮಗಾರಿಗಳ ಸಂಪೂರ್ಣ ಮಾಹಿತಿ ನೀಡುವುದು;</td><td>2024-25ನೇ ಸಾಲಿನ ಆಯವ್ಯಯ ಘೋಷಣೆಯಂತೆ ಮಂಡ್ಯ ಜಿಲ್ಲೆಯ ವಿಶ್ವೇಶ್ವರಯ್ಯ ಚಾನಲ್ ಫಾರಂ (ವಿ.ಸಿ.ಫಾರಂ) ಇಲ್ಲಿ ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 19 ಶಾಸನ 2025, ಬೆಂಗಳೂರು, ದಿನಾಂಕ:24.04.2025 ರಲ್ಲಿ ಮಂಡ್ಯ, ಹಾಸನ, ಮೈಸೂರು; ಚಾಚರಾಜನಗರ ಮತ್ತು ಕೊಡಗು ಜಿಲ್ಲೆಗಳಿಗೆ ವಿಸ್ತರಿಸಿದ ಪ್ರಾದೇಶಿಕ ಅಧಿಕಾರಿ ಕ್ಷೇತ್ರ ವ್ಯಾಪ್ತಿಯೊಂದಿಗೆ ವಿ.ಸಿ.ಫಾರಂ, ಮಂಡ್ಯದಲ್ಲಿ ಕೇಂದ್ರ ಕಾರ್ಯಸ್ಥಾನವನ್ನು ಒಳಗೊಂಡಂತೆ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯವನ್ನು ಸ್ಥಾಪಿಸಲಾಗಿರುತ್ತದೆ.<br><br>2025-26ನೇ ಸಾಲಿನ ಆಯವ್ಯಯದಲ್ಲಿ ಕರ್ನಾಟಕ ರಾಜ್ಯ ಸರ್ಕಾರವು ಪ್ರಾರಂಭಿಕ ಕಾರ್ಯಚಟುವಟಿಕೆಗಳಿಗೆ ರೂ.25.00 ಕೋಟಿಗಳ ಅನುದಾನವನ್ನು ಮೀಸಲಿಡಲಾಗಿದೆ.<br><br>ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯವನ್ನು ಪ್ರಸ್ತುತ ವಿ.ಸಿ.ಫಾರಂ ಹೊಂದಿರುವ ಒಟ್ಟು 670 ಎಕರೆ ಭೂ ವಿಸ್ತೀರ್ಣದ ಆವರಣದಲ್ಲಿಯೇ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಮಂಡ್ಯದ ಕೇಂದ್ರ ಸ್ಥಾನವನ್ನು ಸ್ಥಾಪಿಸಲಾಗಿರುತ್ತದೆ.<br>ಮಂಡ್ಯ ಕೃಷಿ ವಿಶ್ವವಿದ್ಯಾಲಯ ವ್ಯಾಪ್ತಿಗೆ ಬೆಂಗಳೂರು ಕೃಷಿ ವಿಶ್ವವಿದ್ಯಾಲಯದಿಂದ ಈ ಕೆಳಕಂಡಂತೆ ಸಂಸ್ಥೆಗಳನ್ನು ನೀಡಲಾಗಿದೆ.<br>
<table>
<tr><th>ಕ್ರ. ಸಂ</th><th>ವಿವರ</th><th>ಭೂ ವಿಸ್ತೀರ್ಣ (ಎಕರೆ-ಗುಂಟೆ)</th></tr>
<tr><td>1</td><td>ವಲಯ ಕೃಷಿ ಸಂಶೋಧನಾ ಕೇಂದ್ರ, ಕೃಷಿ ಮಾಹಾವಿದ್ಯಾಲಯ/ ಕೃಷಿ ವಿಜ್ಞಾನ ಕೇಂದ್ರ, ಮಂಡ್ಯ</td><td>640-30</td></tr>
<tr><td>2</td><td>ಕೃಷಿ ವಿಜ್ಞಾನ ಕೇಂದ್ರ,</td><td>18-27</td></tr>
</table>
</td></tr>
</table>

| | | |
|---|---|---|
| | ಚಾಮರಾಜನಗರ | |
| 3 | ಕೃಷಿ ಮಹಾವಿದ್ಯಾಲಯ, ಚಾಮರಾಜನಗರ | 77-20 |
| 4 | ಸಾವಯವ ಕೃಷಿ ಸಂಶೋಧನಾ ಕೇಂದ್ರ, ನಾಗನ ಹಳ್ಳಿ, ಮೈಸೂರು | 44-30 |
| 5 | ಕೃಷಿ ಮಹಾವಿದ್ಯಾಲಯ, ಕಾರೆಕೆರೆ, ಹಾಸನ | 160-11 |
| 6 | ಕೃಷಿ ಸಂಶೋಧನಾ ಕೇಂದ್ರ, ಮಡೆನೂರು | 115-30 |
| 7 | ಕೃಷಿ ವಿಜ್ಞಾನ ಕೇಂದ್ರ, ಕಂದಲಿ | 49-00 |
| 8 | ಕೃಷಿ ವಿಜ್ಞಾನ ಕೇಂದ್ರ, ಅರಸೀಕೆರೆ | 59-06 |
| 9 | ಕೃಷಿ ವಿಜ್ಞಾನ ಕೇಂದ್ರ, ಗುಂಜೇವು | 352-00 |
| 10 | ಅರಣ್ಯ ಮತ್ತು ಕೃಷಿ ಮಹಾವಿದ್ಯಾಲಯ, ಪೊನ್ನಂಪೇಟೆ | 57-86 |
| 11 | ಕೃಷಿ ಮತ್ತು ತೋಟಗಾರಿಕೆ ಸಂಶೋಧನಾ ಕೇಂದ್ರ, ಮಡಿಕೇರಿ | 11-47 |

| | | |
|---|---|---|
| ಆ. | ಸದರಿ ವಿಶ್ವವಿದ್ಯಾನಿಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಹಾಗೂ ಬೋಧಕೇತರ ಮಂಜೂರಾದ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಹಾಗೂ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳೆಷ್ಟು; ಈ ವಿಶ್ವವಿದ್ಯಾಲಯದ ಈಗಿನ ಸ್ಥಿತಿಗತಿಗಳೇನು ಸದರಿ ವಿಶ್ವವಿದ್ಯಾಲಯದಲ್ಲಿ ಯಾವೆಲ್ಲ ವಿಭಾಗಗಳು ಕಾರ್ಯನಿರ್ವಹಿಸುತ್ತಿವೆ. | ಸದರಿ ವಿಶ್ವವಿದ್ಯಾಲಯದಲ್ಲಿ ಕೃಷಿ ಮಹಾವಿದ್ಯಾಲಯ, ವಿ.ಸಿ.ಫಾರಂ, ಮಂಡ್ಯ ವಲಯ ಕೃಷಿ ಸಂಶೋಧನ ಕೇಂದ್ರ, ಸಹ ವಿಸ್ತರಣ ನಿರ್ದೇಶಕರ ಕಛೇರಿ, ಅಖಿಲ ಭಾರತ ಸುಸಂಘಟಿತ ಸಂಶೋಧನಾ ಪ್ರಾಯೋಜನಗಳು, ಕೃಷಿ ವಿಜ್ಞಾನ ಕೇಂದ್ರ, ಸಾವಯವ ಕೃಷಿ ಸಂಶೋಧನ ಕೇಂದ್ರ ನಾಗನಹಳ್ಳಿ, ವಿಸ್ತರಣಾ ಶಿಕ್ಷಣ ಘಟಕ, ನಾಗನಹಳ್ಳಿ, ಕೃಷಿ ಮಹಾವಿದ್ಯಾಲಯ, ಹಾಸನದ ಬಿ.ಎಸ್ಸಿ.(ಕೃಷಿ) ಆಹಾರ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ಕೃಷಿ ಸಂಶೋಧನಾ ಕೇಂದ್ರ, ಮಡೆನೂರು, ಗುಂಜೇವು, ಅರಸೀಕೆರೆ, ಕೃಷಿ ವಿಜ್ಞಾನ ಕೇಂದ್ರ ಹಾಸನ, ಕೃಷಿ ಮಹಾವಿದ್ಯಾಲಯ, ಚಾಮರಾಜನಗರ, ಕೃಷಿ ವಿಜ್ಞಾನ ಕೇಂದ್ರ, ಚಾಮರಾಜನಗರ, ಅರಣ್ಯ ಮಹಾವಿದ್ಯಾಲಯ, ಪೊನ್ನಂಪೇಟೆ, ವಿಸ್ತರಣಾ ಶಿಕ್ಷಣ ಘಟಕ, ಮಡಿಕೇರಿ, ಕೃಷಿ ಸಂಶೋಧನಾ ಕೇಂದ್ರ, ಮಡಿಕೇರಿ ಹಾಗೂ ಪೊನ್ನಂಪೇಟೆ ಈ ಮೇಲಿನ ಎಲ್ಲಾ ಮಹಾವಿದ್ಯಾಲಯಗಳು ಸಂಶೋಧನೆ ಮತ್ತು ವಿಸ್ತರಣಾ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರ ಮಂಜೂರಾದ ಒಟ್ಟು ಸಿಬ್ಬಂದಿಗಳ ಸಂಖ್ಯೆ:706 ಹುದ್ದೆಗಳಿದ್ದು, ಹಾಗೂ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ:302 ಇರುತ್ತದೆ. |

<table>
<tr><td></td><td></td><td>ಈ ವಿಶ್ವವಿದ್ಯಾಲಯ ಕಾರ್ಯಚಟುವಟಿಕೆಗಳನ್ನು ಪ್ರಾರಂಭಿಸಲು ಆಡಳಿತ, ಶೈಕ್ಷಣಿಕ, ನಿರ್ದೇಶನಾಲಯ ಹಾಗೂ ಹಣಕಾಸು ವಿಭಾಗಗಳು ಕಾರ್ಯಾರಂಭ ಮಾಡಲು ಮತ್ತು ಸ್ನಾತಕೋತ್ತರ ಪದವಿ ತರಗತಿಗಳನ್ನು ಪ್ರಾರಂಭಿಸಲು ಕ್ರಮವಹಿಸಲಾಗಿದೆ.</td></tr>
<tr><td>ಇ.</td><td>ಈ ಕೃಷಿ ವಿಜ್ಞಾನ ವಿಶ್ವವಿದ್ಯಾಲಯದ ವ್ಯಾಪ್ತಿಗೆ ಒಳಪಡುವ ಜಿಲ್ಲೆಗಳು ಯಾವುವು; ಇಲ್ಲಿ ಗರಿಷ್ಠ ಎಷ್ಟು ವಿದ್ಯಾರ್ಥಿಗಳಿಗೆ ಶಿಕ್ಷಣ ಲಭಿಸುತ್ತದೆ? (ಸಂಪೂರ್ಣ ಮಾಹಿತಿ ನೀಡುವುದು)</td><td>ಮಂಡ್ಯ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ವ್ಯಾಪ್ತಿಯಲ್ಲಿ ಮಂಡ್ಯ, ಹಾಸನ, ಮೈಸೂರು, ಚಾಮರಾಜನಗರ ಮತ್ತು ಕೊಡಗು ಜಿಲ್ಲೆಗಳು ಒಳಪಡುತ್ತವೆ ಹಾಗೂ ಮಂಡ್ಯ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿ ಪ್ರಸ್ತುತ ಅಂದಾಜು 1568 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದು, ಶಿಕ್ಷಣವನ್ನು ಪೂರ್ಣಪ್ರಮಾಣದಲ್ಲಿ ನೀಡಲಾಗುತ್ತಿದೆ.<br><br>• ಕೃಷಿ ಮಹಾವಿದ್ಯಾಲಯ, ಮಂಡ್ಯದಲ್ಲಿ ವ್ಯಾಸಂಗ ಮಾಡುತ್ತಿರುವ ಒಟ್ಟು ವಿದ್ಯಾರ್ಥಿಗಳ ವಿವರ (1ನೇ, 2ನೇ, 3ನೇ ಮತ್ತು 4ನೇ ವರ್ಷದ ವಿದ್ಯಾರ್ಥಿಗಳು)<br>o ಸ್ನಾತಕ ಪದವಿ -384<br>o ಸ್ನಾತಕೋತ್ತರ ಪದವಿ - 44<br>o ಪಿ.ಹೆಚ್.ಡಿ. - 20<br>o ಡಿಪ್ಲೋಮಾ (ಕೃಷಿ) - 42<br>• ಕೃಷಿ ಮಹಾವಿದ್ಯಾಲಯ ಹಾಸನದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ವಿವರ:-<br>❖ **ಸ್ನಾತಕ ಪದವಿ:**<br>o ಬಿ.ಎಸ್ಸಿ(ಕೃಷಿ) - 302<br>o ಆಹಾರ ತಂತ್ರಜ್ಞಾನ - 196<br>o ಜೈವಿಕ ತಂತ್ರಜ್ಞಾನ - 173<br>o ಒಟ್ಟು ಸ್ನಾತಕ ಪದವಿ ವಿದ್ಯಾರ್ಥಿಗಳು- 671<br>❖ **ಸ್ನಾತಕೋತ್ತರ ಪದವಿ** - 20<br>• ಕೃಷಿ ಮಹಾವಿದ್ಯಾಲಯ, ಚಾಮರಾಜನಗರದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ವಿವರ:-<br>❖ ಸ್ನಾತಕ ಪದವಿ - 127<br>• ಅರಣ್ಯ ಮಹಾವಿದ್ಯಾಲಯ, ಪೊನ್ನಂಪೇಟೆಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ವಿವರ:-<br>o ಸ್ನಾತಕ ಪದವಿ - 254<br>o ಸ್ನಾತಕೋತ್ತರ ಪದರಿ - 03<br>o ಪಿ.ಹೆಚ್.ಡಿ. - 03</td></tr>
</table>

AGRI 89 AUB 2025

(ಎನ್. ಚಲುವರಾಯಸ್ವಾಮಿ)
ಕೃಷಿ ಸಚಿವರು